AUGUST 21, 2025

**AKASHAVANI - DHARWAD**

**PRADESH SAMACHARA (KANNADA) 07.05 A.M.**

**ಮುಖ್ಯಾಂಶಗಳು:**

- **ಕೃಷಿ ಇಲಾಖೆಯಲ್ಲಿ ಒಂದು ಸಾವಿರ ಹುದ್ದೆಗಳ ನೇಮಕಾತಿ, ಹಣಕಾಸು ಇಲಾಖೆ ಅನುಮೋದನೆ; ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ.**
- **ಗ್ರಾಮೀಣ ಹಾಗೂ ನಗರ ಪುನರ್‌ವಸತಿ ಕಾರ್ಯಕರ್ತರ ಮಾಸಿಕ ಗೌರವಧನ ಹೆಚ್ಚಳ.**
- **ಕರ್ನಾಟಕ ಕೆರೆ ಸಂರಕ್ಷಣಾ ತಿದ್ದುಪಡಿ ವಿಧೇಯಕ; ಸಂಬಂಧಿಸಿದ ಸದನ ಸಮಿತಿಗೆ ಒಪ್ಪಿಸುವಂತೆ ಮೇಲ್ಮನೆಯಲ್ಲಿ ಪ್ರತಿಪಕ್ಷ ಬಿಜೆಪಿ ಆಗ್ರಹ.**
- **ಹಲವು ಜಿಲ್ಲೆಗಳಲ್ಲಿ ಮುಂದುವರಿದ ಮಳೆ; ಜನಜೀವನ ವ್ಯತ್ಯಯ; ತುಂಬಿ ಹರಿಯುತ್ತಿರುವ ಜಲಾಶಯಗಳು.**

<><><>

**ಕೃಷಿ ಇಲಾಖೆಯಲ್ಲಿ ಒಂದು ಸಾವಿರ ಹುದ್ದೆಗಳ** ನೇಮಕಾತಿಗಾಗಿ, ಹಣಕಾಸು ಇಲಾಖೆ ಅನುಮೋದನೆ ನೀಡಿದ್ದು, ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು, ಕೃಷಿ ಸಚಿವ ಚಲುವರಾಯಸ್ವಾಮಿ, ವಿಧಾನಸಭೆಯಲ್ಲಿ ಹೇಳಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ, ಉಮಾನಾಥ ಕೋಟ್ಯಾನ್ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸೆಪ್ಟೆಂಬರ್‌ನಲ್ಲಿ ಪರೀಕ್ಷೆ ನಡೆಸಿ, ಮುಂದಿನ ಎರಡು–ಮೂರು ತಿಂಗಳಲ್ಲಿ, ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ಅಲ್ಲಿಯತನಕ ಪ್ರಭಾರ ಹುದೆಗಳ ಜವಾಬ್ದಾರಿಯಲ್ಲಿ, ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಹೇಳಿದರು. ಕೃಷಿ ಇಲಾಖೆಯಲ್ಲಿ ಶೇಕಡ 57ರಷ್ಟು ಸಿಬ್ಬಂದಿ ಕೊರತೆ ಇದೆ. ಹಾಗಿದ್ದರೂ, ಯಾವುದೇ ಯೋಜನೆಗಳನ್ನು ನಿಲ್ಲಿಸಿಲ್ಲ. ಜಲಾನಯನ ಯೋಜನೆಯಲ್ಲಿ, ಗುರಿ ಮೀರಿದ ಸಾಧನೆ ಮಾಡಲಾಗಿದೆ. ಕೇಂದ್ರ ಸರ್ಕಾರದಿಂದ 300 ಕೋಟಿ ರೂಪಾಯಿಗಳನ್ನು ಹೆಚ್ಚುವರಿಯಾಗಿ ಪಡೆದುಕೊಳ್ಳಲಾಗಿದೆ. 224 ಕ್ಷೇತ್ರಗಳಲ್ಲೂ ಕೃಷಿ ಹೊಂಡ ನಿರ್ಮಿಸಲಾಗುವುದು ಎಂದು ಹೇಳಿದರು.

<><><>

**ಧಾರ್ಮಿಕ ಹಬ್ಬ, ಉತ್ಸವಗಳ ಆಚರಣೆ ಕುರಿತಂತೆ, ಕಾನೂನು ಪಾಲನೆ ಜೊತೆಗೆ,** ಸಂಪ್ರದಾಯದ ಭಾವನೆಗೆ ಧಕ್ಕೆಯಾಗದಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ವಿಧಾನಸಭೆಯ ಶೂನ್ಯ ವೇಳೆಯಲ್ಲಿ ಬಿಜೆಪಿ ಶಾಸಕ ವೇದವ್ಯಾಸ ಕಾಮತ್ ಸೇರಿದಂತೆ, ಹಲವು ಶಾಸಕರು ಮಾಡಿದ ಪ್ರಸ್ತಾಪಕ್ಕೆ ಉತ್ತರಿಸಿದ ಸಚಿವರು, ಯಾವುದೇ ಸರ್ಕಾರವಾದರೂ ಕಾನೂನು ಪಾಲನೆ ಮಾಡಲೇಬೇಕು. ರಾತ್ರಿ 10ರ ನಂತರ ಚುನಾವಣಾ ಪ್ರಚಾರ, ಸಭೆ ಸಮಾರಂಭ, ಹೆಚ್ಚು ಸದ್ದು ಮಾಡುವುದು ನಿ ೇಧ ಇದೆ. ಕೆಲವೆಡೆ ಸಾಂಪ್ರದಾಯಿಕ ಆಚರಣೆಗಳಿಗೆ ಅವಕಾಶವಿದೆ. ಕಾನೂನು ಮತ್ತು ಸುವ್ಯವಸ್ಥೆಗೆ ಅಡಚಣೆಯಾಗುವಂತಹ ಕಡೆಗಳಲ್ಲಿ ಪೊಲೀಸರು ಕ್ರಮ ಕೈಗೊಳ್ಳಬೇಕಾಗುತ್ತದೆ. ಈ ವಿಚಾರದ ಬಗ್ಗೆ ಗೃಹ ಸಚಿವರು ಹಾಗೂ ಕಾನೂನು ಸಚಿವರ ಗಮನಕ್ಕೆ ತಂದು ಸೂಕ್ತ ಉತ್ತರ ಕೊಡಿಸುವ ಭರವಸೆ ನೀಡಿದರು.

<><><>

**ಗ್ರಾಮೀಣ ಪುನರ್‌ವಸತಿ ಯೋಜನೆಯಡಿ, ಪುನರ್‌ವಸತಿ ಕಾರ್ಯಕರ್ತರನ್ನು** ನಿಯಮಾನುಸಾರ ಗೌರವಧನ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಆದರೆ, ಅವರನ್ನು ಕಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. **ವಿಧಾನಸಭೆ** ಪ್ರಶ್ನೋತ್ತರ **ಕಲಾಪದಲ್ಲಿ** ಮೈಸೂರು ಶಾಸಕ ಟಿ.ಎಸ್.ಶ್ರೀವತ್ಸ ಅವರ ಪ್ರಶ್ನೆಗೆ ಉತ್ತರಿಸಿದ ಅವರು; ಗ್ರಾಮೀಣ ಹಾಗೂ ನಗರ ಪುನರ್‌ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು 9 ಸಾವಿರ ರೂಪಾಯಿಯಿಂದ 10 ಸಾವಿರ ರೂಪಾಯಿಗೆ ಹಾಗೂ ವಿವಿಧೋದ್ದೇಶ ಪುನರ್‌ವಸತಿ ಕಾರ್ಯಕರ್ತರ

ಮಾಸಿಕ ಗೌರವ ಧನವನ್ನು 15 ಸಾವಿರದಿಂದ 16 ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ. ಪ್ರಸ್ತುತ 5 ಸಾವಿರದ 601 ಗ್ರಾಮೀಣ ಪುನರ್‌ವಸತಿ ಕಾರ್ಯಕರ್ತರು, 450 ನಗರ ಪುನರ್‌ವಸತಿ ಕಾರ್ಯಕರ್ತರು ಹಾಗೂ 172 ವಿವಿಧೋದ್ದೇಶ ಪುನರ್‌ವಸತಿ ಕಾರ್ಯಕರ್ತರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.

<><><>

**ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎಸ್.ಸಿ.ಎಸ್.ಪಿ–ಟಿ.ಎಸ್.ಪಿ ಯೋಜನೆಯಡಿ, 42 ಸಾವಿರದ** 17 ಕೋಟಿ ರೂಪಾಯಿ ಅನುದಾನ ಹಂಚಿಕೆ ಮಾಡಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾಕ್ಟರ್ ಎಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ. ಎಂ.ಚಂದ್ರಪ್ಪ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪರಿಶಿಷ್ಟ ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ, ಹಣ ಬಳಕೆ ಮಾಡಲು ಕಾನೂನಿನಲ್ಲಿ ಅವಕಾಶ ಮಾಡಿಕೊಡಲಾಗಿದೆ. 2025–26ನೇ ಸಾಲಿನಲ್ಲಿ ಗೃಹಲಕ್ಷ್ಮೀ ಯೋಜನೆಗೆ 7 ಸಾವಿರದ 438 ಕೋಟಿ, ಅನ್ನಭಾಗ್ಯ ಯೋಜನೆಯಡಿ 1 ಸಾವಿರದ 670 ಕೋಟಿ, ಗೃಹಜ್ಯೋತಿ ಯೋಜನೆಗೆ 2 ಸಾವಿರದ 226 ಕೋಟಿ, ಶಕ್ತಿ ಯೋಜನೆಗೆ 1 ಸಾವಿರದ 537 ಹಾಗೂ ಯುವನಿಧಿ ಯೋಜನೆಗೆ 162 ಕೋಟಿ ರೂಪಾಯಿ ಸೇರಿದಂತೆ ಒಟ್ಟು 13 ಸಾವಿರದ 433 ಕೋಟಿ ರೂಪಾಯಿ ಹಣ ಬಳಕೆ ಮಾಡಿದೆ ಎಂದರು.

<><><>

**ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ** ಸಾಲಿನ "ಕರ್ನಾಟಕ ನಿರಪರಾಧೀಕರಣ ವಿಧೇಯಕ"ವು ವಿಧಾನಪರಿಷತ್ತಿನಲ್ಲಿ ಅಂಗೀಕಾರವಾಯಿತು. ಭಾರೀ ಮತ್ತು ಮಧ್ಯಮ ಕೈಗಾರಿಕೆಗಳು, ಮೂಲಭೂತ ಸೌಕರ್ಯ ಸಚಿವರಾದ ಎಂ. ಬಿ. ಪಾಟೀಲ್; ಅಪರಾಧಗಳನ್ನು ಅಪರಾಧೀಕರಿಸಲು ಮತ್ತು ತರ್ಕಬದ್ಧಗೊಳಿಸುಲು, ಕೆಲವು ಅಧಿನಿಯಮಗಳನ್ನು ತಿದ್ದುಪಡಿ ಮಾಡಲು ಹಾಗೂ ಬದುಕುವುದು ಮತ್ತು ವ್ಯವಹಾರ ನಡೆಸುವುದನ್ನು ಸರಾಗಗೊಳಿಸುವುದಕ್ಕಾಗಿ ನಂಬಿಕೆ – ಆಧಾರಿತ ಆಡಳಿತವನ್ನು ಮತ್ತಷ್ಟು ವೃದ್ಧಿಸಲು ಈ ವಿಧೇಯಕವನ್ನು ತರಲಾಗಿದೆ ಎಂದು ವಿಧೇಯಕವನ್ನು ಪರ್ಯಾಲೋಚನೆಗೆ ಸದನದಲ್ಲಿ ಮಂಡಿಸಿದರು. ಸದನದಲ್ಲಿ ಈ ವಿಧೇಯಕಕ್ಕೆ ಸಭಾಪತಿಗಳಿಂದ ಅಂಗೀಕರಾರ ದೊರೆಯಿತು.

<><><>

**ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ** ಕರ್ನಾಟಕ ಕೆರೆ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕವನ್ನು ಸಂಬಂಧಿಸಿದ ಸದನ ಸಮಿತಿಗೆ ಒಪ್ಪಿಸಬೇಕು ಎಂದು ಮೇಲ್ಮನೆಯಿಂದ ಪ್ರತಿಪಕ್ಷ ಬಿಜೆಪಿಯ ಸದಸ್ಯರು ಆಗ್ರಹಿಸಿದ್ದಾರೆ. ವಿಧಾನಪರಿಷತ್ತಿನ ಕಲಾಪದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರು, ವಿಧೇಯಕಗಳ ಚರ್ಚೆ ಕೈಗೆತ್ತಿಕೊಂಡಾಗ, ಸಭಾನಾಯಕರೂ ಆಗಿರುವ ಸಣ್ಣ ನೀರಾವರಿ ಸಚಿವ ಭೋಸರಾಜ ಅವರು, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ ಕರ್ನಾಟಕ ಕೆರೆ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕವನ್ನು ಮಂಡಿಸಿ ಒಪ್ಪಿಗೆ ಕೋರಿದರು. ವಿಧೇಯಕದ ಪರವಾಗಿ ಆಡಳಿತ ಪಕ್ಷದ ಸದಸ್ಯ ಐವಾನ್ ಡಿಸೋಜ ಅವರು, ವಿಧೇಯಕದಿಂದ ಸಾರ್ವಜನಿಕರಿಗೆ ಬಹಳಷ್ಟು ಅನುಕೂಲವಾಗಲಿದೆ. ಹಲವು ವರ್ಷಗಳ ಸಮಸ್ಯೆಗಳಿಗೆ ಪರಿಹಾರ ದೊರಕಲಿದೆ ಎಂದರು. ಬಿಜೆಪಿ ಸದಸ್ಯ ರವಿಕುಮಾರ, ಈ ವಿಧೇಯಕವು ಕೆರೆ ಸಂರಕ್ಷಣೆ ಮಾಡುವ ಬದಲಿಗೆ ಒತ್ತುವರಿಗೆ ಅನುಕೂಲವಾಗಲಿದೆ. ವಿಧೇಯಕದ ಕುರಿತು ವಿಸ್ತಾರವಾದ ಪರಿಶೀಲನೆ ನಡೆಸಲು ಸಂಬಂಧಿಸಿದ ಸದನ ಸಮಿತಿಗೆ ಒಪ್ಪಿಸಬೇಕು ಎಂದು ಆಗ್ರಹಿಸಿದರು. ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು, ಈ ವಿಧೇಯಕವು ಸಂರಕ್ಷಣೆಗೆ ವಿರುದ್ಧದ ಹಾನಿ, ನಾಶ ಮಾಡುವುದಕ್ಕೆ ನೆರವಾಗುತ್ತದೆ ಕೂಡಲೇ ಇದನ್ನು ಸದನ ಸಮಿತಿಗೆ ಒಪ್ಪಿಸಬೇಕು ಎಂದು ಒತ್ತಾಯಿಸಿದರು.

<><><>

**ಆತ್ಮನಿರ್ಭರ ಭಾರತ– ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ** ನಿಯಬದ್ಧಗೊಳಿಸುವಿಕೆ ಯೋಜನೆಯಡಿ, ಆರ್ಥಿಕ ಧನಸಹಾಯ ಪಡೆದು, ಸಂಕಲ್ಪ – ಎಂಬ ಹೆಸರಿನಲ್ಲಿ ಕಡ್ಲೆ ಮಿಠಾಯಿ ಉದ್ಯಮ ಆರಂಭಿಸಿ ಯಶಸ್ವಿಯಾಗಿರುವ ಬೆಂಗಳೂರು ಮೂಲದ ಶಮಂತ ಅವರು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

**ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡು ಪ್ರದೇಶದಲ್ಲಿ ಎಡೆಬಿಡದೆ** ಮಳೆ ಸುರಿಯುತ್ತಿದ್ದು, ಕಳೆದ 24 ಗಂಟೆಗಳಲ್ಲಿ ಜಿಲ್ಲೆಯಲ್ಲಿ ಮಳೆಯಿಂದಾಗಿ 18 ಮನೆಗಳಿಗೆ ಪೂರ್ಣ ಪ್ರಮಾಣದ ಹಾನಿ ಉಂಟಾಗಿದೆ. ಅರಬ್ಬೀ ಸಮುದ್ರದಲ್ಲಿ ಪ್ರಕ್ಷುಬ್ಧ ವಾತಾವರಣ ಮುಂದುವರೆದಿದೆ. ಮಳೆಯ ಜೊತೆಗೆ ಗಾಳಿ ಕೂಡಾ ಬೀಸುವ ಸಾಧ್ಯತೆಯಿರುವುದರಿಂದ ಮೀನುಗಾರರು ಸಮುದ್ರಕ್ಕೆ ಮೀನುಗಾರಿಕೆ ತೆರಳದಂತೆ ಸೂಚಿಸಲಾಗಿದ್ದು, ಮುಂದಿನ ಹವಾಮಾನ ಇಲಾಖೆಯ ಮುನ್ಸೂಚನೆಯನ್ವಯ ಮೀನುಗಾರಿಕೆಯನ್ನು ನಡೆಸದಂತೆ ಮತ್ತು ಸಮುದ್ರ ತೀರದಲ್ಲಿ ವಾಸಿಸುವ ಮೀನುಗಾರರು ಹಠಾತ್ ಪ್ರವಾಹ ಉಂಟಾಗಬಹುದಾದ ಹಿನ್ನಲೆಯಲ್ಲಿ ಜಾಗೃತಿ ವಹಿಸುವಂತೆ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ದಾವಣಗೆರೆ ಜಿಲ್ಲಾದ್ಯಂತ ಮಳೆ ಮುಂದುವರಿದಿದ್ದು, ಸಾರ್ವಜನಿಕರ ಆಸ್ತಿಗೆ ನಷ್ಟ** ಉಂಟಾಗಿದೆ. ಹರಿಹರ ಮತ್ತು ಚನ್ನಗಿರಿ ತಾಲೂಕಿನಲ್ಲಿ 10 ಕ್ಕೂ ಅಧಿಕ ಮನೆಗಳ ಗೋಡೆಗಳು ಕುಸಿದು ಬಿದ್ದಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ನಿರಂತರ ಮಳೆಯಿಂದಾಗಿ ಜಗಳೂರು ತಾಲ್ಲೂಕಿನ 5 ಕೆರೆಗಳು ಕೋಡಿ ಬಿದ್ದಿದ್ದು, ಅಪಾರ ಪ್ರಮಾಣ ನೀರು ಹೊರಹೋಗುತ್ತಿದೆ.

ತುಂಗಭದ್ರಾ ನದಿ ಮೂಲಕ 57 ಕೆರೆ ತುಂಬಿಸುವ ಯೋಜನೆಯಿಂದಾಗಿ ಈಗಾಗಲೇ ಬಹುತೇಕ ಕೆರೆಗಳಿಗೆ ನೀರು ಹರಿಯುತ್ತಿದ್ದು, ಇದೀಗ ತಾಲ್ಲೂಕಿನ ಕೆರೆಗಳು ಜಲರಾಶಿಯಿಂದ ಸಮೃದ್ಧಿಗೊಂಡಿವೆ. ಸದಾ ಬರದ ನಾಡು ಎಂದೇ ಗುರುತಿಸಿಕೊಂಡಿದ್ದ ಜಗಳೂರು ತಾಲ್ಲೂಕಿನಲ್ಲೀಗ ಹಸಿರು ಕಂಗೊಳಿಸುತ್ತಿದೆ.

<><><>

**ಹಾವೇರಿ ಜಿಲ್ಲೆಯಾದ್ಯಂತ ನಿರಂತರ ಮಳೆ ಸುರಿಯುತ್ತಿದ್ದು, ಜನಜೀವನ** ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ, ವರದಾ, ಕುಮದ್ವತಿ ಹಾಗೂ ಧರ್ಮ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿದ್ದು, ನದಿಗೆ ಇಳಿಯದಂತೆ ಜಿಲ್ಲಾಡಳಿತ ಸೂಚಿಸಿದೆ.

<><><>

**ಬೆಳಗಾವಿ ಜಿಲ್ಲೆಯಲ್ಲಿ ಮಳೆಯ ಅಬ್ಬರ ಮುಂದುವರಿದಿದ್ದು ಸಾಮಾನ್ಯ ಜನ ಜೀವನ** ಅಸ್ತವ್ಯಸ್ತಗೊಂಡಿದೆ. ಪಶ್ಚಿಮ ಘಟ್ಟದ ಪ್ರದೇಶದಲ್ಲಿನ ವ್ಯಾಪಕ ಮಳೆಯಿಂದ ಹಾಗೂ ಮಹಾರಾ ್ಟ್ರದ ಕೊಯ್ನಾ ಜಲಾಶಯದಿಂದ 90 ಸಾವಿರ ಹಾಗೂ ವಾರಣಾ ಜಲಾಶಯದಿಂದ 40 ಕ್ಯೂಸೆಕ್ ನೀರು ಹರಿಬಿಟ್ಟಿರುವುದರಿಂದ ಕೃ ್ಣ ನದಿ ಸೇರಿದಂತೆ ಅದರ ಉಪ ನದಿಗಳು ಹಾಗೂ ಮಲಪ್ರಭಾ, ಘಟಪ್ರಭಾ ನದಿಗಳು ತುಂಬಿ ಹರಿಯುತ್ತಿವೆ. ಇದರಿಂದಾಗಿ ಪ್ರವಾಹದ ಭೀತಿ ಸೃಷ್ಟಿಯಾಗಿದೆ. ಗೋಕಾಕ ತಾಲೂಕಿನ ಲೋಳಸೂರ್ ಸೇತುವೆ, ರಾಯಬಾಗ ತಾಲೂಕಿನ ಕುಡಚಿ ಪ್ರಮುಖ ಸೇತುವೆಗಳು ಸೇರಿದಂತೆ ಇನ್ನಿತರ ಕೆಳಹಂತದ 9 ಸೇತುವೆಗಳು ಜಲಾವೃತ್ತಗೊಂಡಿವೆ. ಇದರಿಂದ ಉಂಟಾದ ಸಂಪರ್ಕ ಸಾಧನೆಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿದೆ. ಖಾನಾಪೂರ ತಾಲೂಕಿನಲ್ಲಿ ನಿರಂತರ ಮಳೆಯಿಂದಾಗಿ ಜತ್ ಜಾಂಬೋಟಿ ರಾಜ್ಯ ಹೆದ್ದಾರಿ ಸಂಪರ್ಕ ಕಡಿತಗೊಂಡಿದೆ. ಘಟಪ್ರಭಾ ನದಿಗೆ ಒಳಹರಿವು ಹೆಚ್ಚಾಗಿದ್ದು, ಹಿಡಕಲ್ ಜಲಾಶಯದಿಂದ 50ಸಾವಿರ ಕ್ಯೂಸೆಕ್ ನೀರು ಹೊರಕ್ಕೆ ಬಿಡುಗಡೆ ಮಾಡಲಾಗಿದ್ದು, ಅದೇ ರೀತಿ ಸವದತ್ತಿ ತಾಲ್ಲೂಕಿನ ನವಿಲು ತೀರ್ಥ ಜಲಾಶಯದಿಂದ 40 ಸಾವಿರ ಕ್ಯೂಸೆಕ್ ನೀರು ಹರಿಬಿಡಲಾಗಿದೆ. ಮಲಪ್ರಭಾ ಮತ್ತು ಘಟಪ್ರಭಾ ನದಿ ತೀರದ ಜನರಿಗೆ ಸುರಕ್ಷಿತ ದೃಷ್ಟಿಯಿಂದ ಎಚ್ಚರಿಕೆ ನೀಡಲಾಗಿದೆ. ರಾಮದುರ್ಗ ಪಟ್ಟಣದಲ್ಲಿ ಮಳೆಯಿಂದಾಗಿ ರಾತ್ರಿ ಮನೆ ಮೇಲ್ಛಾವಣಿ ಕುಸಿದು 75 ವ ್ಷದ ವೃದ್ಧ ಸಾವಿಗೀಡಾಗಿದ್ದಾರೆ. ರಾಮದುರ್ಗ, ಗೋಕಾಕ ನಗರದ ಕೆಲವೆಡೆ ಮಳೆ ನೀರು ನುಗ್ಗಿದ್ದು, ಸಾರ್ವಜನಿಕರಿಗೆ ತೀವ್ರ ತೊಂದರೆಯುಂಟಾಗಿದೆ.

<><><>

**ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಕೃ ್ಣ**, ಘಟಪ್ರಭಾ ಹಾಗೂ ಮಲಪ್ರಭಾ ನದಿಗಳ ನೀರಿನ ಮಟ್ಟ ಹೆಚ್ಚಾಗಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದ್ದು, ಮುಧೋಳ ತಾಲೂಕಿನ ಮಿರ್ಜಿ ಗ್ರಾಮದಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದೆ ಎಂದು **ಬಾಗಲಕೋಟೆ** ಜಿಲ್ಲಾಧಿಕಾರಿ ಸಂಗಪ್ಪ ಹೇಳಿದ್ದಾರೆ. ಮುಧೋಳ ತಾಲೂಕಿನ ಪ್ರವಾಹ ಪೀಡಿತ ಮಿರ್ಜಿ ಗ್ರಾಮಕ್ಕೆ ಭೇಟಿ ನೀಡಿ, ಮಾತನಾಡಿದ ಅವರು ಮಿರ್ಜಿ ಗ್ರಾಮದ 12 ಕುಟುಂಬಗಳು ಬಾಧಿತಗೊಂಡಿದ್ದು, ಆ ಕುಟುಂಬದ 62 ಜನ

ಸಂತ್ರಸ್ತರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿ, ಅಲ್ಲಿ ಊಟ, ವಸತಿ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಇನ್ನು ನೀರಿನ ಪ್ರಮಾಣ ಹೆಚ್ಚಾಗುತ್ತಿರುವದರಿಂದ ನದಿ ದಡದ ಗ್ರಾಮಗಳು ಹೆಚ್ಚಿನ ಪ್ರಮಾಣದಲ್ಲಿ ಬಾದಿತವಾಗುವ ಸಾಧ್ಯತೆಯಿದ್ದು, ಈ ಬಗ್ಗೆ ಮುಂಜಾಗ್ರತವಾಗಿ ಗ್ರಾಮಸ್ಥರು ಸುರಕ್ಷಿತ ಸ್ಥಳಗಳಿಗೆ ಇಲ್ಲವೇ ಜಿಲ್ಲಾಡಳಿತ ಸ್ಥಾಪಿಸಲಾದ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ ಎಂದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

- **ಕೃಷಿ ಇಲಾಖೆಯಲ್ಲಿ ಒಂದು ಸಾವಿರ ಹುದ್ದೆಗಳ ನೇಮಕಾತಿ, ಹಣಕಾಸು ಇಲಾಖೆ ಅನುಮೋದನೆ; ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ.**
- **ಗ್ರಾಮೀಣ ಹಾಗೂ ನಗರ ಪುನರ್‌ವಸತಿ ಕಾರ್ಯಕರ್ತರ ಮಾಸಿಕ ಗೌರವಧನ ಹೆಚ್ಚಳ.**
- **ಕರ್ನಾಟಕ ಕೆರೆ ಸಂರಕ್ಷಣಾ ತಿದ್ದುಪಡಿ ವಿಧೇಯಕ; ಸಂಬಂಧಿಸಿದ ಸದನ ಸಮಿತಿಗೆ ಒಪ್ಪಿಸುವಂತೆ ಮೇಲ್ಮನೆಯಲ್ಲಿ ಪ್ರತಿಪಕ್ಷ ಬಿಜೆಪಿ ಆಗ್ರಹ.**
- **ಹಲವು ಜಿಲ್ಲೆಗಳಲ್ಲಿ ಮುಂದುವರಿದ ಮಳೆ; ಜನಜೀವನ ವ್ಯತ್ಯಯ; ತುಂಬಿ ಹರಿಯುತ್ತಿರುವ ಜಲಾಶಯಗಳು.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 .35ಕ್ಕೆ**

<><><><><><>